# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 409 (318) |
| ಉತ್ತರಿಸುವ ದಿನಾಂಕ | 23–09–2020 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಕಳೆದ 3 ವರ್ಷಗಳಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; ಅವರು ಯಾವ ಇಲಾಖೆಯಿಂದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡಿರುತ್ತಾರೆ; | ಕಳೆದ 03 ವರ್ಷಗಳಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಸಂಖ್ಯೆ: 03. ಸದರಿ ನೌಕರರು ಈ ಕೆಳಕಂಡ ಇಲಾಖೆಗಳಿಂದ ವಿಲೀನಗೊಂಡಿರುತ್ತಾರೆ. (ಕೋಷ್ಟಕ 1 ನೋಡಿ) |
| (ಆ) | ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಕಳೆದ 3 ವರ್ಷಗಳಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಹೆಸರು ಮತ್ತು ವಿಳಾಸದೊಂದಿಗೆ ಮಾಹಿತಿ ನೀಡುವುದು; ಅವರು ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಸಮಯದಲ್ಲಿ ಅವರ ಮತ್ತು ಕುಟುಂಬದವರ ಹೆಸರಿನಲ್ಲಿರುವ ಸ್ಥಿರಾಸ್ತಿ ಮತ್ತು ಚರಾಸ್ಥಿಯ ಒಟ್ಟು ಮೌಲ್ಯ ಎಷ್ಟು; | ಕಳೆದ 3 ವರ್ಷಗಳಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡ ಸರ್ಕಾರಿ ನೌಕರರು ಹೆಸರು ಮತ್ತು ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಗಳ ವಿಳಾಸ ಈ ಕೆಳಕಂಡಂತಿದೆ. (ಕೋಷ್ಟಕ 2 ನೋಡಿ) |

| ಕ್ರ.ಸಂ | ನೌಕರರ ಹೆಸರು ಶ್ರೀ/ಶ್ರೀಮತಿ | ಇಲಾಖೆ |
|---|---|---|
| 01 | ಸುಲೋಚನ.ಕೆ.ಆರ್ | ಪೊಲೀಸ್ ಇಲಾಖೆ |
| 02 | ಸುರೇಶ್.ಎ | ಕಾರ್ಮಿಕ ಇಲಾಖೆ |
| 03 | ರಾಘವೇಂದ್ರ ಒಡೆಯರ್ | ಪೊಲೀಸ್ ಇಲಾಖೆ |

| ಕ್ರ ಸಂ | ನೌಕರರ ಹೆಸರು ಶ್ರೀ/ಶ್ರೀಮತಿ | ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ವಿಳಾಸ |
|---|---|---|
| | ಸುಲೋಚನ.ಕೆ.ಆರ್ | ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರ ಕಛೇರಿ, ಕಂದಾಯ ಭವನ, 8ನೇ ಮಹಡಿ, ಕೆ.ಜಿ.ರಸ್ತೆ, ಬೆಂಗಳೂರು |
| | ಸುರೇಶ್.ಎ | ಉಪ ನೋಂದಣಿ ಕಛೇರಿ, ಕೆ.ಆರ್.ಪೇಟೆ, ಮಿನಿ ವಿಧಾನಸೌಧ, ಕೆ.ಆರ್.ಪೇಟೆ, ಮಂಡ್ಯ. |
| | ರಾಘವೇಂದ್ರ ಒಡೆಯರ್ | ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರ ಕಛೇರಿ, ಕಂದಾಯ ಭವನ, 8ನೇ ಮಹಡಿ, ಕೆ.ಜಿ.ರಸ್ತೆ, ಬೆಂಗಳೂರು. |

.....2

| | | |
|---|---|---|
| | | ಸದರಿ ನೌಕರರು ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಸಮಯದಲ್ಲಿ ಅವರು ಸಲ್ಲಿಸಿರುವ ಆಸ್ತಿ ಮತ್ತು ದಾಯಿತ್ವ ಪಟ್ಟಿಯಲ್ಲಿ ನಮೂದಿಸಿರುವ ಸ್ಥಿರಾಸ್ತಿ ಮತ್ತು ಚರಾಸ್ಥಿಗಳ ಮೌಲ್ಯವು ಪ್ರಸ್ತುತ ಇರುವ ಮಾರುಕಟ್ಟೆ ದರಗಳನ್ವಯ ಇರುತ್ತದೆ. |
| (ಇ) | ಪ್ರಸ್ತುತ ವಿಲೀನಗೊಂಡವರ ಹೆಸರಿನಲ್ಲಿ ಮತ್ತು ಅವರ ಅವಲಂಬಿತರ ಹೆಸರಿನಲ್ಲಿ ಇರುವ ಸ್ಥಿರಾಸ್ತಿ ಮತ್ತು ಚರಾಸ್ಥಿಯ ಒಟ್ಟು ಮೌಲ್ಯ ಎಷ್ಟು; ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಮುನ್ನ ಮತ್ತು ವಿಲೀನದ ನಂತರ ಅವರ ಸ್ಥಿರಾಸ್ತಿ ಮತ್ತು ಚರಾಸ್ಥಿಯಲ್ಲಿ ಎಷ್ಟು ಪ್ರಮಾಣದ ಹೆಚ್ಚಳವಾಗಿದೆ; | ಸದರಿ ನೌಕರರು ಸಲ್ಲಿಸಿರುವ ಆಸ್ತಿ ಮತ್ತು ದಾಯಿತ್ವ ಪಟ್ಟಿಗಳನ್ವಯ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡ ನಂತರ ಹೊಸದಾಗಿ ಯಾವುದೇ ಸ್ಥಿರಾಸ್ತಿ ಮತ್ತು ಚರಾಸ್ಥಿಗಳನ್ನು ಖರೀದಿಸಿರುವುದು ಕಂಡುಬಂದಿರುವುದಿಲ್ಲ. ಆದುದರಿಂದ, ಈ ಇಲಾಖೆಗೆ ವಿಲೀನಗೊಂಡ ನಂತರ ಇವರ ಸ್ಥಿರಾಸ್ತಿ ಮತ್ತು ಚರಾಸ್ಥಿಯ ಪ್ರಮಾಣದಲ್ಲಿ ಹೆಚ್ಚಳವಾಗಿರುವುದು ಕಂಡುಬರುವುದಿಲ್ಲ. |
| (ಈ) | ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕಳೆದ 3 ವರ್ಷಗಳಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಭ್ರಷ್ಟಾಚಾರದ ಆರೋಪದಲ್ಲಿ ಅಮಾನತ್ತುಗೊಂಡವರ ಸಂಖ್ಯೆ ಎಷ್ಟು; ಇವರ ಮೇಲೆ ಇಲಾಖೆ ಯಾವ ಕ್ರಮಕೈಗೊಂಡಿದೆ? | ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕಳೆದ 3 ವರ್ಷಗಳಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಇಬ್ಬರು (02) ನೌಕರರನ್ನು ಭ್ರಷ್ಟಾಚಾರದ ಆರೋಪದಲ್ಲಿ ಸೇವೆಯಿಂದ ಅಮಾನತ್ತುಗೊಳಿಸಲಾಗಿರುತ್ತದೆ.<br>1) ಒಬ್ಬ ನೌಕರರಿಗೆ ಸಂಬಂಧಿಸಿದಂತೆ, ಭ್ರಷ್ಟಾಚಾರ ನಿಗ್ರಹ ದಳವು ಅಂತಿಮ ತನಿಖಾ ವರದಿ ಸಲ್ಲಿಸಿದ್ದು, ಈ ನೌಕರರಿಗೆ ಅಭಿಯೋಜನೆಗೆ ಒಳಪಡಿಸಲು ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ 1988 ರ ಕಲಂ 19(1)(ಸಿ) ರಡಿ ಇಲಾಖೆಯಿಂದ ಮಂಜೂರಾತಿ ನೀಡಲಾಗಿದೆ.<br>2) ಇನ್ನೊಬ್ಬ ನೌಕರರ ವಿರುದ್ಧ ಭ್ರಷ್ಟಾಚಾರ ನಿಗ್ರಹದಳದ ವಿಚಾರಣೆಯನ್ನು ಕಾಯ್ದಿರಿಸಿ ನ್ಯಾಯಾಂಗ ಬಂಧನದಲ್ಲಿರಿಸಿರುವ ದಿನಾಂಕ: 05-04-2019 ರಿಂದ ಜಾರಿಗೆ ಬರುವಂತೆ ಅಮಾನತ್ತಿನಲ್ಲಿರಿಸಲಾಗಿತ್ತು ಪ್ರಸ್ತುತ ಸದರಿ ನೌಕರರ ವಿರುದ್ಧ ವಿಚಾರಣೆಯು ಜಾರಿಯಲ್ಲಿರುತ್ತದೆ. |

**ಸಂಖ್ಯೆ:** ಕಂಇ-ಎಂಎನ್ ಎಸ್ಎ-157/2020

(ಆರ್ ಅಶೋಕ್)
ಕಂದಾಯ ಸಚಿವರು